ಕರ್ನಾಟಕ ಸರ್ಕಾರ
# ಮೀನುಗಾರಿಕೆ ನಿರ್ದೇಶನಾಲಯ
3ನೇ ಮಹಡಿ, ಪೋಡಿಯಂ ಬ್ಲಾಕ್, ವಿಶ್ವೇಶ್ವರಯ್ಯ ಕೇಂದ್ರ, ಡಾ|| ಬಿ. ಆರ್. ಅಂಬೇಡ್ಕರ್ ವೀಧಿ, ಬೆಂಗಳೂರು – 560 001
ದೂ : 080 - 2286 4681/4604 ಫ್ಯಾಕ್ಸ್ : 080 - 2286 4619 ಇಮೇಲ್ : dof-blr-ka@nic.in

**ಹಿಂ ಸಂಖ್ಯೆ:DOF-TECHOALL2/150/2021,E-590053. ದಿನಾಂಕ:29/05/2022.**

ಸರ್ಕಾರದ ಕಾರ್ಯದರ್ಶಿಗಳು, ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆರವರ ಪತ್ರ ಸಂಖ್ಯೆ: ಪಸಂಮೀ/ಇ-84/ಮೀಇಇ/2022, ದಿನಾಂಕ: 25/05/2022ರ ಆದೇಶದ ಪ್ರತಿಯನ್ನು ಲಗತ್ತಿಸಿ ಕಳುಹಿಸುತ್ತಾ, ಸರ್ಕಾರದ ಆದೇಶದಲ್ಲಿ ಪ್ರಸ್ತುತ ಚಾಲ್ತಿಯಲ್ಲಿನ ಒಳನಾಡು ಕಾರ್ಯನೀತಿ-2014 ರನ್ವಯ ಇಲಾಖಾ ವ್ಯಾಪ್ತಿಯ ಜಲಸಂಪನ್ಮೂಲಗಳ ಮೀನು ಪಾಶುವಾರು ಹಕ್ಕನ್ನು ಗುತ್ತಿಗೆ ಮೀನುಗಾರರ ಸಹಕಾರ ಸಂಘಗಳಿಗೆ ವಿಲೇವಾರಿ ನಂತರ ಹಾಗೂ ಮೀನುಗಾರರಿಗೆ ಪರವಾನಗಿ ನೀಡುವ ಮುಖಾಂತರ ಮೀನುಗಾರಿಕೆ ಕೈಗೊಳ್ಳಲು ಅವಕಾಶ ಕಲ್ಪಿಸಲಾಗುತ್ತಿರುವ ಜಲಸಂಪನ್ಮೂಲಗಳನ್ನು ಹೊರತುಪಡಿಸಿ ಉಳಿದ ಜಲಸಂಪನ್ಮೂಲಗಳ ಮೀನು ಪಾಶುವಾರು ಹಕ್ಕನ್ನು ಇ-ಟೆಂಡರ್ ಪ್ರಕ್ರಿಯೆ ಮೂಲಕ 2022-23 ನೇ ಸಾಲಿನ ಮೀನುಗಾರಿಕೆ ಫಸಲಿ ವರ್ಷದಿಂದ ವಿಲೇವಾರಿ ಮಾಡಲು ಆದೇಶಿಸಲಾಗಿದೆ. ಸದರಿ ಆದೇಶದನ್ವಯ ಇ-ಟೆಂಡರ್ ಮೂಲಕ ಜಲ ಸಂಪನ್ಮೂಲಗಳ ಮೀನು ಪಾಶುವಾರು ಹಕ್ಕನ್ನು ವಿಲೇ ಮಾಡುತ್ತಿರುವುದರ ಬಗ್ಗೆ ಸಾರ್ವಜನಿಕರಿಗೆ ವ್ಯಾಪಕ ಪ್ರಚಾರ ಮಾಡಲು ಹಾಗೂ ಟೆಂಡರ್ ಪ್ರಕ್ರಿಯೆಯಲ್ಲಿ ಭಾಗವಿಸುವವರು ಕಡ್ಡಾಯವಾಗಿ DSC key ಪಡೆದುಕೊಳ್ಳಲು ವ್ಯಾಪಕಪ್ರಚಾರ ಮಾಡಲು ಮತ್ತು ಸಂಬಂಧಪಟ್ಟ ಎಲ್ಲಾ ಸಹಾಯಕ ನಿರ್ದೇಶಕರು e-procurement ನಲ್ಲಿ DSC key ಪಡೆದುಕೊಳ್ಳುವುದು ಸೇರಿದಂತೆ ಇನ್ನಿತರ ಪೂರ್ವಬಾವಿ ಸಿದ್ಧತೆ ಮಾಡಿಕೊಳ್ಳಲು ಸೂಚಿಸಲಾಗಿದೆ. ಇ-ಟೆಂಡರ್ ಮೂಲಕ ಜಲ ಸಂಪನ್ಮೂಲಗಳ ಮೀನು ಪಾಶುವಾರು ಹಕ್ಕನ್ನು ವಿಲೇ ಮಾಡುವಾಗ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ಶೇ24.10 ಮೀಸಲಾತಿ ನೀಡುವ ಕುರಿತು ಸರ್ಕಾರದ ಹಂತದಲ್ಲಿ ಪರಿಶೀಲನೆಯಲ್ಲಿರುತ್ತದೆ.

ಅಡಕ: ಮೇಲಿನಂತೆ,

ಸಹಿ/-
ಮೀನುಗಾರಿಕೆ ನಿರ್ದೇಶಕರು

ಗೆ:
ಎಲ್ಲಾ ಮೀನುಗಾರಿಕೆ ಜಂಟಿ ನಿರ್ದೇಶಕರುಗಳು,
ಎಲ್ಲಾ ಜಿಲ್ಲಾ ಮಟ್ಟದ ಮೀನುಗಾರಿಕೆ ಅಧಿಕಾರಿಗಳಿಗೆ,
ಎಲ್ಲಾ ತಾಲ್ಲೂಕು ಮಟ್ಟದ ಮೀನುಗಾರಿಕೆ ಅಧಿಕಾರಿಗಳಿಗೆ,
ಪ್ರತಿಯನ್ನು: ಕೇಂದ್ರ ಕಛೇರಿಯ ಹಗುಪ(1) ಸಂಕಲನಕ್ಕೆ ಮಾಹಿತಿಗಾಗಿ.
ಪ್ರತಿಯನ್ನು: ಕೇಂದ್ರ ಕಛೇರಿಯ ಹಗುಪ (2) ದಾಸ್ತಾನು ಕಡತಕ್ಕೆ.

30/05/2022
ಮೀನುಗಾರಿಕೆ ನಿರ್ದೇಶಕರ ಪರವಾಗಿ

30/5/22

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಕರ್ನಾಟಕ ರಾಜ್ಯದಲ್ಲಿನ ಮೀನುಗಾರಿಕೆ ಇಲಾಖಾ ವ್ಯಾಪ್ತಿಯ ಜಲಸಂಪನ್ಮೂಲಗಳ ಮೀನು ಪಾಶುವಾರು ಹಕ್ಕನ್ನು ಗುತ್ತಿಗೆ ಕಾರ್ಯನೀತಿ-2014 ರನ್ವಯ ನೇರ ಗುತ್ತಿಗೆ ಮುಖಾಂತರ ಮೀನುಗಾರರ ಸಹಕಾರ ಸಂಘಗಳಿಗೆ ವಿಲೇವಾರಿ ಮಾಡಿದ ನಂತರ ಉಳಿಯುವ ಜಲಸಂಪನ್ಮೂಲಗಳ ಮೀನು ಪಾಶುವಾರು ಹಕ್ಕನ್ನು ಇ-ಟೆಂಡರ್ ಹಾಗೂ ಇ-ಹರಾಜು ಮೂಲಕ ವಿಲೇವಾರಿ ಮಾಡುವ ಕುರಿತು.

ಓದಲಾಗಿದೆ:- (1) ಪತ್ರ ಸಂಖ್ಯೆ: ಪಸಂಮೀ/ಇ-149/ಮೀಇಇ/2021 ದಿನಾಂಕ: 25-11-2021.
(2) ಮೀನುಗಾರಿಕೆ ನಿರ್ದೇಶಕರ ಏಕ ಕಡತ ಪತ್ರ ಸಂಖ್ಯೆ: DOF-TECHOALL-2/150/2021, ದಿನಾಂಕ: 16-04-2022.

******

## ಪ್ರಸ್ತಾವನೆ:

ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ಪತ್ರದಲ್ಲಿ, ಪ್ರಸ್ತುತ ಚಾಲ್ತಿಯಲ್ಲಿರುವ ಒಳನಾಡು ಮೀನುಗಾರಿಕೆ ಕಾರ್ಯನೀತಿ-2014 ರನ್ವಯ ಇಲಾಖಾ ವ್ಯಾಪ್ತಿಯ ಜಲಸಂಪನ್ಮೂಲಗಳ ಮೀನು ಪಾಶುವಾರು ಹಕ್ಕನ್ನು ನೇರ ಗುತ್ತಿಗೆ ಮೂಲಕ ಮೀನುಗಾರರ ಸಹಕಾರ ಸಂಘಗಳಿಗೆ ವಿಲೇವಾರಿ ಮಾಡಿದ ನಂತರ ಹಾಗೂ ಮೀನುಗಾರರಿಗೆ ಪರವಾನಗಿ ನೀಡುವ ಮುಖಾಂತರ ಮಾತ್ರ ಮೀನುಗಾರಿಕೆ ಕೈಗೊಳ್ಳಲು ಅವಕಾಶ ಕಲ್ಪಿಸಲಾಗುತ್ತಿರುವ ಜಲಸಂಪನ್ಮೂಲಗಳನ್ನು ಹೊರತು ಪಡಿಸಿ ಉಳಿದ ಜಲಸಂಪನ್ಮೂಲಗಳ ಮೀನು ಪಾಶುವಾರು ಹಕ್ಕನ್ನು ಪ್ರಸ್ತುತ ಚಾಲ್ತಿಯಲ್ಲಿರುವ manual ಟೆಂಡರ್-ಕಂ-ಹರಾಜನ್ನು ಸ್ಥಗಿತಗೊಳಿಸಿ, ಕಡ್ಡಾಯವಾಗಿ ಇ-ಟೆಂಡರ್ / ಇ-ಹರಾಜು ಮೂಲಕ ವಿಲೇವಾರಿ ಮಾಡಲು ತಿಳಿಸಲಾಗಿತ್ತು.

ಮೇಲೆ ಕ್ರಮ ಸಂಖ್ಯೆ (2)ರಲ್ಲಿ ಓದಲಾದ ನಿರ್ದೇಶಕರು, ಮೀನುಗಾರಿಕೆ ಇಲಾಖೆ ಇವರ ಪತ್ರದಲ್ಲಿ, ಪ್ರಸ್ತುತ ಚಾಲ್ತಿಯಲ್ಲಿರುವ ಒಳನಾಡು ಮೀನುಗಾರಿಕೆ ಕಾರ್ಯನೀತಿ-2014 ರನ್ವಯ ಇಲಾಖಾ ವ್ಯಾಪ್ತಿಯ ಜಲಸಂಪನ್ಮೂಲಗಳ ಮೀನು ಪಾಶುವಾರು ಹಕ್ಕನ್ನು ನೇರ ಗುತ್ತಿಗೆ ಮೂಲಕ ಮೀನುಗಾರರ ಸಹಕಾರ ಸಂಘಗಳಿಗೆ ವಿಲೇವಾರಿ ಮಾಡಿದ ನಂತರ ಹಾಗೂ ಮೀನುಗಾರರಿಗೆ ಪರವಾನಗಿ ನೀಡುವ ಮುಖಾಂತರ ಮಾತ್ರ ಮೀನುಗಾರಿಕೆ ಕೈಗೊಳ್ಳಲು ಅವಕಾಶ ಕಲ್ಪಿಸಲಾಗುತ್ತಿರುವ ಜಲಸಂಪನ್ಮೂಲಗಳನ್ನು ಹೊರತುಪಡಿಸಿ ಉಳಿದ ಜಲಸಂಪನ್ಮೂಲಗಳ ಮೀನು ಪಾಶುವಾರು ಹಕ್ಕನ್ನು ಹಿಂದಿನ ವರ್ಷದ ಗುತ್ತಿಗೆ / ಬಿಡ್ ಮೊತ್ತ ರೂ. 5.00 ಲಕ್ಷಕ್ಕಿಂತ ಹೆಚ್ಚು ಇದ್ದಲ್ಲಿ ಇ-ಹರಾಜು ಮೂಲಕ ಹಾಗೂ ಹಿಂದಿನ ವರ್ಷದ ಗುತ್ತಿಗೆ / ಬಿಡ್ ಮೊತ್ತ ರೂ. 5.00 ಲಕ್ಷ ಅಥವಾ ರೂ. 5.00 ಲಕ್ಷಕ್ಕಿಂತ ಕಡಿಮೆ ಇದ್ದಲ್ಲಿ ಇ-ಟೆಂಡರ್ ಮೂಲಕ 2022-23ನೇ ಸಾಲಿನ ಮೀನುಗಾರಿಕೆ ಫಸಲಿ ವರ್ಷದಿಂದ ವಿಲೇವಾರಿ ಮಾಡುವುದು ಸೂಕ್ತವೆಂದು ಅಭಿಪ್ರಾಯಿಸುತ್ತಾ, ಸೂಕ್ತ ಆದೇಶ ಹೊರಡಿಸಲು ಕೋರಿರುತ್ತಾರೆ.

-2-



Generated from eOffice by LAKSHMI B, DOF-SDA(LB), SECOND DIVISION ASSISTANT, DIRECTORATE OF FISHERIES on 30/05/2022 01:18 PM

ಮೀನುಗಾರಿಕೆ ನಿರ್ದೇಶಕರ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಕೆಳಕಂಡಂತೆ ಆದೇಶಿಸಿದೆ.

**ಆದೇಶ ಸಂಖ್ಯೆ: ಪಸಂಮೀ ಇ-84 ಮೀಇಇ 2022, ಬೆಂಗಳೂರು ದಿನಾಂಕ: 25 -05-2022**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಪ್ರಸ್ತುತ ಚಾಲ್ತಿಯಲ್ಲಿರುವ ಒಳನಾಡು ಮೀನುಗಾರಿಕೆ ಕಾರ್ಯನೀತಿ-2014 ರನ್ವಯ ಇಲಾಖಾ ವ್ಯಾಪ್ತಿಯ ಜಲಸಂಪನ್ಮೂಲಗಳ ಮೀನು ಪಾಶುವಾರು ಹಕ್ಕನ್ನು ಗುತ್ತಿಗೆ ಮೂಲಕ ಮೀನುಗಾರರ ಸಹಕಾರ ಸಂಘಗಳಿಗೆ ವಿಲೇವಾರಿ ಮಾಡಿದ ನಂತರ ಹಾಗೂ ಮೀನುಗಾರರಿಗೆ ಪರವಾನಗಿ ನೀಡುವ ಮುಖಾಂತರ ಮೀನುಗಾರಿಕೆ ಕೈಗೊಳ್ಳಲು ಅವಕಾಶ ಕಲ್ಪಿಸಲಾಗುತ್ತಿರುವ ಜಲಸಂಪನ್ಮೂಲಗಳನ್ನು ಹೊರತುಪಡಿಸಿ ಉಳಿದ ಜಲಸಂಪನ್ಮೂಲಗಳ ಮೀನು ಪಾಶುವಾರು ಹಕ್ಕನ್ನು ಇ-ಟೆಂಡರ್ ಪ್ರಕ್ರಿಯೆ ಮೂಲಕ 2022-23ನೇ ಸಾಲಿನ ಮೀನುಗಾರಿಕೆ ಫಸಲಿ ವರ್ಷದಿಂದ ವಿಲೇವಾರಿ ಮಾಡಲು ಆದೇಶಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

Kamakshi U.A 25/5/2022
(ಕಾಮಾಕ್ಷಿ ಯು.ಎ.)
ಸರ್ಕಾರದ ಅಧೀನ ಕಾರ್ಯದರ್ಶಿ
ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ
TC 25.5.2022 (ಮೀನುಗಾರಿಕೆ)

ಇವರಿಗೆ

1. ಪ್ರಧಾನ ಮಹಾಲೇಖಪಾಲರು (ಜಿ&ಎಸ್‌ಎಸ್‌ಎ)(ಇ&ಆರ್‌ಎಸ್‌ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು.
2. ಪ್ರಧಾನ ಮಹಾಲೇಖಪಾಲರು (ಎ&ಇ), ಕರ್ನಾಟಕ, ಪಾರ್ಕ್‌ಹೌಸ್ ರಸ್ತೆ, ಬೆಂಗಳೂರು.
3. ಮೀನುಗಾರಿಕೆ ನಿರ್ದೇಶಕರು, ಬೆಂಗಳೂರು.
4. ಸಂಬಂಧಪಟ್ಟ ಎಲ್ಲಾ ಅಧಿಕಾರಿಗಳಿಗೆ - ಮೀನುಗಾರಿಕೆ ನಿರ್ದೇಶಕರ ಮುಖಾಂತರ.
5. ಕಂಟ್ರೋಲ್ ರೂಮ್-ಕಂ-24x7 ಹೆಲ್ಪ್ ಲೈನ್ (ಸಹಾಯವಾಣಿ), ಮೀನುಗಾರಿಕೆ ಇಲಾಖೆ.
6. ಶಾಖಾ ರಕ್ಷಾ ಕಡತ / ಹೆಚ್ಚಿನ ಪ್ರತಿಗಳು / ಸಮನ್ವಯ-ಕಂಪೆಂಡಿಯಂ.

ಪ್ರತಿಯನ್ನು

1. ಮಾನ್ಯ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿಗಳು / ಜಂಟಿ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿ / ಆಪ್ತ ಸಹಾಯಕರು, ಪಸಂಮೀ ಇಲಾಖೆ, ವಿಕಾಸಸೌಧ, ಬೆಂಗಳೂರು.



Generated from eOffice by LAKSHMI B, DOF-SDA(LB), SECOND DIVISION ASSISTANT, DIRECTORATE OF FISHERIES on 30/05/2022 01:18 PM